2ನೇ ಅಪರ ಮುಖ್ಯ ಮಹಾನಗರ  ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು ನಗರ
ಸಿ.ಸಿ.ನಂಃ 5554 ಃ2015

| | | | |
|---|---|---|---|
| ಸಾಕ್ಷಿದಾರರ ಹೆಸರು | ರಾಜಶೇಖರಯ್ಯ | ಸಿ ಡಬ್ಲ್ಯು | 26 |
| ತಂದೆಯ ಹೆಸರು | ಚಂದ್ರಶೇಖರಯ್ಯ | ಪಿ ಡಬ್ಲ್ಯು | 9 |
| ವಯಸ್ಸು | 42 ವರ್ಷ | | |
| ಉದ್ಯೋಗ | ಪಿ.ಐ, ಲೋಕಾಯುಕ್ತ | | |
| ವಾಸಸ್ಥಾನ | ಬೈಯಂಡನಹಳ್ಳಿ, ಬೆಂಗಳೂರು | | |

ಪ್ರಮಾಣ ವಚನ ಬೋಧಿಸಿದ ದಿನಾಂಕ ಃ 17.09.2024

ಮುಖ್ಯ ವಿಚಾರಣೆ ಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-

ದಿನಾಂಕಃ 06.12.2012 ರಿಂದ ದಿಃ26.01.2018 ರವರೆಗೆ ಬಸವನಗುಡಿ ಪೊಲೀಸ್ ಠಾಣೆಯಲ್ಲಿ ನಾನು ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿಃ02.06.2014 ರಂದು ನಾನು ಠಾಣಾಧಿಕಾರಿಯಾಗಿದ್ದಾಗ ಸಂಜೆ 7.00 ಗಂಟೆಗೆ ಚಾಸಾ 1 ರವರು ಹಾಜರಾಗಿ ನೀಡಿದ ವರದಿಯನ್ನು ಸ್ವೀಕರಿಸಿ ದೂರು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಸದರಿ ದೂರನ್ನು ಈಗಾಗಲೇ ನಿಪಿ-1 ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1ಬಿ ಎಂದು ಗುರ್ತಿಸಲಾಯಿತು. ಸದರಿ ಪ್ರ ವ ವರದಿಯನ್ನು ನಿಪಿ-2 ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-2ಎ ಎಂದು ಗುರ್ತಿಸಲಾಯಿತು. ದಿಃ 03.06.2014 ರಂದು ಚಾಸಾ 15 ರಿಂದ 20 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಆ ಸಮಯದಲ್ಲಿ ಚಾಸಾ 15 ಮತ್ತು 18 ರವರಿಂದ ಒಂದು ರಶೀದಿ ಪಡೆದುಕೊಂಡಿರುತ್ತೇನೆ. ಸದರಿ ರಶೀದಿ ಜೆರಾಕ್ಸ್ ಪ್ರತಿಯಾಗಿರುವುದರಿಂದ ನಿಶಾನೆಗೊಳಿಸಿರುದಿಲ್ಲ. ದಿಃ 04.06.2014 ರಂದು ಆರೋಪಿಯ ಸ್ವ ಇಚ್ಛಾ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಾಖಲೆಗಳಾದ ಬಾಡಿಗೆ ಕರಾರು ಪತ್ರ, ಮನವಿ ಪತ್ರ, ರೈಲ್ವೆ ಟಿಕೆಟ್ ಮತ್ತು ವೋಚರ್ ಪಡೆದುಕೊಂಡಿದ್ದು ಸದರಿ ದಾಖಲೆಗಳು ಜೆರಾಕ್ಸ್ ಪ್ರತಿಯಾಗಿರುವುದರಿಂದ ನಿಶಾನೆಗೊಳಿಸಿರುದಿಲ್ಲ. ಚಾಸಾ 14 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿಃ 06.06.2014 ರಂದು ಚಾಸಾ 12 ಮತ್ತು 13, 21 ರಿಂದ 24 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ರಶೀದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ 3 ಎಂದು ಗುರುತಿಸಲಾಯಿತು. ದಿಃ 07.06.2014 ರಂದು ಚಾಸಾ 9 ಮತ್ತು ಚಾಸಾ 10 ರವರ

ಹೇಳಿಕೆ ಪಡೆದುಕೊಂಡಿರುತ್ತೇನೆ. ಮೂಲ ರಶೀದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು. ದಿಃ13.06.2014, ದಿಃ 20.06.2014, ದಿಃ 25.06.2014, ದಿಃ 30.06.2014 ರಂದು ಚಾಸಾ 5 ಮತ್ತು 11 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ದಿಃ 11.08.2014 ರಂದು ಮನವಿ ಪತ್ರ ಸಲ್ಲಿಸಿರುತ್ತೇನೆ. ನಂತರ ಆರೋಪಿಯ ವಿರುದ್ದ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಆರೋಪಿಗಳನ್ನು ನೋಡಿದರೆ ಗುರುತಿಸುತ್ತೇನೆ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-

ಸಾಕ್ಷಿದಾರರ ಹೇಳಿಕೆ ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಎಲ್ಲಾ ದಾಖಲೆಗಳನ್ನು ಠಾಣೆಯಲ್ಲಿಯೇ ಸೃಷ್ಟಿ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ದಾಖಲೆಗಳು ಜೆರಾಕ್ಸ್ ಪ್ರತಿ ಇದ್ದು ಸೃಷ್ಟಿ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ತನಿಖೆ ಮಾಡದೇ ಸುಳ್ಳು ದೋಷರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇದೆ

(ಸಾಹಿಲ್ ಅಹ್ಮದ್ ಎಸ್ ಕುನ್ನಿಭಾವಿ)
2ನೇ ಅ ಮು ಮ ದಂ.